**ಓ.ಎಸ್. ನಂ. 135/2016** **ಪಿ.ಡಬ್ಲ್ಯೂ- 2**

**ಸಾಕ್ಷಿಯನ್ನು ದಿನಾಂಕ 4.9.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಿಪಿ8 ಕ್ರಯಪತ್ರಕ್ಕೆ ನಾನು ಸಾಕ್ಷಿದಾರನಾಗಿ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯನ್ನು ಮೂಲ 1 ನೇ ಪ್ರತಿವಾದಿ ಮತ್ತು 2 ರಿಂದ 4 ನೇ ಪ್ರತಿವಾದಿಯರು ವಾದಿಯರ ತಂದೆ ನಾಗರಾಜು ರವರಿಗೆ ಬರೆದುಕೊಟ್ಟಿರುತ್ತಾರೆ. ಸದರಿ ದಾಖಲೆಗೆ 1 ಮತ್ತು 2 ನೇ ಪ್ರತಿವಾದಿಯರು ಹೆಬ್ಬೆಟ್ಟು ಗುರುತನ್ನು ಹಾಕಿರುತ್ತಾರೆ. 3 ಮತ್ತು 4 ನೇ ಪ್ರತಿವಾದಿಯರು ಸಹಿಯನ್ನು ಮಾಡಿರುತ್ತಾರೆ. ಸಾಕ್ಷಿದಾರರು ಅವರ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ8 ಎ ಮತ್ತು ನಿಪಿ8 ಬಿ ಎಂದು ಗುರುತಿಸಲಾಯಿತು. ನಿಪಿ8 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ8 ಸಿ ಎಂದು ಗುರುತಿಸಲಾಯಿತು. ಇನ್ನೊಬ್ಬ ಸಾಕ್ಷಿದಾರನಾಗಿ ವೆಂಕಟೇಶ ಎಂಬುವವರು ಸಹಿ ಮಾಡಿದ್ದು, ಸಾಕ್ಷಿದಾರರು ಸದರಿ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ8 ಡಿ ಎಂದು ಗುರುತಿಸಲಾಯಿತು. ಸದರಿ ದಾಖಲೆಯನ್ನು ದಸ್ತಾವೇಜು ಬರಹಗಾರರಾದ ರಂಗಪ್ಪ ರವರು ತಯಾರಿಸಿರುತ್ತಾರೆ.

ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರು ಸಮಯ ಕೋರಿದ್ದು, ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.